# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ನಬಾರ್ಡ್ ಆರ್‌ಐಡಿಎಫ್-20 ರಡಿ ಕೆರೆಗಳ ದುರಸ್ತಿ ಮತ್ತು ಪುನಶ್ಚೇತನ ಕಾಮಗಾರಿಗಳಿಗಾಗಿ ಪ್ರಸಕ್ತ 2016-17ನೇ ಸಾಲಿನಲ್ಲಿ ಅನುದಾನ ಮರುಹಂಚಿಕೆ ಮಾಡಿ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:20:ಆರ್‌ಆರ್‌ಸಿ: 2015, ದಿನಾಂಕ: 08.04.2015.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:51:ಆರ್‌ಆರ್‌ಸಿ: 2016, ದಿನಾಂಕ: 08.09.2016.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಇವರ ಪತ್ರ ಸಂಖ್ಯೆ:ಮುಇಂ:ಪಂರಾಇ:ಬೆಂ;ಲೆವಿ:ಲೆಸ-2:2016-17 ದಿನಾಂಕ 28.02.2017.

**ಪ್ರಸ್ತಾವನೆ:**

ನಬಾರ್ಡ್ ಸಂಸ್ಥೆಯ ನೆರವಿನಡಿ ಆರ್‌ಐಡಿಎಫ್ ಯೋಜನೆಯಡಿ ಮೇಲೆ ಓದಲಾದ-1ರ ಸರ್ಕಾರಿ ಆದೇಶಗಳಲ್ಲಿ 87 ಕೆರೆಗಳ ದುರಸ್ತಿ ಮತ್ತು ಪುನಶ್ಚೇತನ ಕಾಮಗಾರಿಗಳಿಗೆ ರೂ.1374.50 ಲಕ್ಷಗಳಿಗೆ ಅನುಮೋದನೆ ನೀಡಲಾಗಿದೆ.

ಜಿಲ್ಲಾ ಪಂಚಾಯತಿಗಳು ಅನುಷ್ಠಾನಗೊಳಿಸುತ್ತಿರುವ ಸದರಿ ಕಾಮಗಾರಿಗಳಿಗಾಗಿ ಪ್ರಸ್ತುತ 2016-17ನೇ ಸಾಲಿನಲ್ಲಿ ಪ್ರಗತಿ ಹೊಂದಿದ ಕಾಮಗಾರಿಗಳ ಬಾಕಿ ಬಿಲ್ಲುಗಳ ತೀರುವಳಿಗೆ ಹಣ ಬಿಡುಗಡೆ ಮಾಡುವಂತೆ ಜಿಲ್ಲಾ ಪಂಚಾಯತಿಗಳು, ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ರವರ ಮುಖಾಂತರ ಬೇಡಿಕೆ ಸಲ್ಲಿಸಿದ ಮೇರೆಗೆ ಪ್ರಸ್ತುತ 2016-17ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲಾದ ರೂ.5000.00ಲಕ್ಷಗಳಲ್ಲಿ ನಬಾರ್ಡ್ ಯೋಜನೆಯಡಿ ಅನುಮೊದನೆಗೊಂಡ ರೂ.1374.50ಲಕ್ಷಗಳ ಕೆರೆಗಳ ದುರಸ್ತಿ ಮತ್ತು ಪುನಶ್ಚೇತನ ಕಾಮಗಾರಿಗಳಿಗೆ ಪ್ರತಿಯಾಗಿ ಪ್ರಥಮ ಕಂತಿನಲ್ಲಿ ರೂ.492.40 ಲಕ್ಷಗಳನ್ನು ಮೇಲೆ ಓದಲಾದ-2ರ ಸರ್ಕಾರಿ ಆದೇಶದಲ್ಲಿ ಜಿ.ಪಂ.ಗಳಿಗೆ ಬಿಡುಗಡೆ ಮಾಡಲಾಗಿದೆ.

ಈ ರೀತಿ ಬಿಡುಗಡೆ ಮಾಡಿದ್ದ ಅನುದಾನವನ್ನು ಕೆಳಕಂಡ ಜಿಲ್ಲಾ ಪಂಚಾಯತ್‌ಗಳು ಅಧ್ಯರ್ಪಣೆ ಮಾಡಿರುವುದರಿಂದ ಸದರಿ ಅನುದಾನವನ್ನು ಅನುದಾನವನ್ನು ಹಿಂಪಡೆದು ಕೆಳಕಂಡಂತೆ ಜಿಲ್ಲಾ ಪಂಚಾಯತಿಗಳಿಗೆ ಮರುಹಂಚಿಕೆ ಮಾಡಿ ಬಿಡುಗಡೆಗೊಳಿಸಲು ಸರ್ಕಾರವು ತೀರ್ಮಾನಿಸಿದೆ.

(ರೂ. ಲಕ್ಷಗಳಲ್ಲಿ)

| ಕ್ರ ಸಂ | ಜಿಲ್ಲೆ | ಅಧ್ಯರ್ಪಿಸಿದ ಮೊತ್ತ | ಮರುಹಂಚಿಕೆ ಮಾಡಿದ ಮೊತ್ತ |
|---|---|---|---|
| 1 | ಬೆಂಗಳೂರು ಗ್ರಾಮಾಂತರ | 23.48 | 0.00 |
| 2 | ಬೆಂಗಳೂರು ನಗರ | 16.77 | 0.00 |
| 3 | ಬೆಳಗಾವಿ (ಚಿಕ್ಕೋಡಿ) | 0.00 | 57.40 |
| 4 | ಗದಗ | 0.00 | 50.00 |
| 5 | ಹಾವೇರಿ | 28.65 | 0.00 |
| 6 | ಉತ್ತರ ಕನ್ನಡ (ಶಿರಸಿ) | 38.50 | 0.00 |
| | ಒಟ್ಟು | 107.40 | 107.40 |

ಆದ್ದರಿಂದ ಈ ಆದೇಶ

**<u>ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:51/1:ಆರ್‌ಆರ್‌ಸಿ:2016, ಬೆಂಗಳೂರು, ದಿನಾಂಕ:06.03.2017</u>**

ನಬಾರ್ಡ್ ಆರ್‌ಐಡಿಎಫ್-22ರಡಿಯಲ್ಲಿ ಕೆರೆಗಳ ದುರಸ್ತಿ ಮತ್ತು ಪುನಶ್ಚೇತನ ಕಾಮಗಾರಿಗಳನ್ನು ಜಿಲ್ಲಾ ಪಂಚಾಯತಿಗಳು ಕೈಗೆತ್ತಿಕೊಂಡಿದ್ದು, ಪ್ರಗತಿ ಹೊಂದಿರುವ ಕಾಮಗಾರಿಗಳಿಗಾಗಿ ರೂ.107.40 ಲಕ್ಷಗಳನ್ನು (ಒಂದು ನೂರ ಏಳು ಲಕ್ಷದ ನಲವತ್ತು ಸಾವಿರ

ರೂಪಾಯಿಗಳು ಮಾತ್ರ) ಕೆರೆಗಳ ದುರಸ್ತಿ ಮತ್ತು ಪುನಶ್ಚೇತನ ಲೆಕ್ಕ ಶೀರ್ಷಿಕೆ-4702-00-101-1-14-436 ರಲ್ಲಿ ಕೆಳಕಂಡಂತೆ ಮರುಹಂಚಿಕೆ ಮಾಡಿ ಬಿಡುಗಡೆ ಮಾಡಿದೆ.

(ರೂ. ಲಕ್ಷಗಳಲ್ಲಿ)

| ಕ್ರ ಸಂ | ಜಿಲ್ಲೆ | ಅಧ್ಯರ್ಪಿಸಿದ ಮೊತ್ತ | ಮರುಹಂಚಿಕೆ ಮಾಡಿ ಬಿಡುಗಡೆ ಮಾಡಿದ ಮೊತ್ತ |
|---|---|---|---|
| 1 | ಬೆಂಗಳೂರು ಗ್ರಾಮಾಂತರ | 23.48 | 0.00 |
| 2 | ಬೆಂಗಳೂರು ನಗರ | 16.77 | 0.00 |
| 3 | ಬೆಳಗಾವಿ (ಚಿಕ್ಕೋಡಿ) | 0.00 | 57.40 |
| 4 | ಗದಗ | 0.00 | 50.00 |
| 5 | ಹಾವೇರಿ | 28.65 | 0.00 |
| 6 | ಉತ್ತರ ಕನ್ನಡ(ಶಿರಸಿ) | 38.50 | 0.00 |
| | ಒಟ್ಟು | 107.40 | 107.40 |

ಮೇಲ್ಕಂಡಂತೆ ಅಧ್ಯರ್ಪಣೆ ಮಾಡಿದ ಅನುದಾನವನ್ನು ಮರುಹಂಚಿಕೆ ಮಾಡಿ ಜಿಲ್ಲಾ ಪಂಚಾಯಿತಿಗಳಿಗೆ ಬಿಡುಗಡೆಮಾಡಲು ಸರ್ಕಾರವು ಹರ್ಷಿಸುತ್ತದೆ. ಬಿಡುಗಡೆ ಮಾಡಿರುವ ಅನುದಾನವನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ವಿನಿಯೋಗಿಸಲು ಆದೇಶಿಸಿದೆ.

**ಷರತ್ತುಗಳು**

1. ಈ ಅನುದಾನವನ್ನು ಅನುಮೋದನೆಯಾದ ನಬಾರ್ಡ್-20ರ ಮಾಲಿಕೆಯ ಕೆರೆಗಳ ದುರಸ್ತಿ ಮತ್ತು ಪುನಶ್ಚೇತನ ಕಾಮಗಾರಿಯ ಹೊರತು ಬೇರೆ ಯಾವುದೇ ಕಾಮಗಾರಿಗಳಿಗೆ ಉಪಯೋಗಿಸಬಾರದು.

2. **ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆರವರು ನಬಾರ್ಡ್ ಯೋಜನೆಯ ಎಲ್ಲಾ ಅನುಮೋದಿತ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅನುಷ್ಠಾನದ ಜವಾಬ್ದಾರಿಯನ್ನು ನಿರ್ವಹಿಸುವುದು ಹಾಗೂ ಅನುಷ್ಠಾನಗೊಂಡ ಕಾಮಗಾರಿಗಳ ಮರುಪಾವತಿ ಬಿಲ್ಲುಗಳನ್ನು ಕಾರ್ಯಪಾಲಕ ಅಭಿಯಂತರರಿಂದ ಪಡೆದು ಸರ್ಕಾರಕ್ಕೆ ಸಲ್ಲಿಸುವುದು ಮತ್ತು ಸರ್ಕಾರಕ್ಕೆ ಕಾಲಕಾಲಕ್ಕೆ ಪ್ರಗತಿಯ ವರದಿಯನ್ನು ನೀಡತಕ್ಕದ್ದು.**

3. ಈ ಕಾರ್ಯಕ್ರಮದಡಿ ಕೆರೆಗಳ ದುರಸ್ತಿ ಮತ್ತು ಪುನಶ್ಚೇತನ ಕಾಮಗಾರಿಗಳಿಗೆ ಬಿಡುಗಡೆ ಮಾಡಿದ ಅನುದಾನದಲ್ಲಿ ಭರಿಸಿದ ವೆಚ್ಚಕ್ಕೆ ಅನುಗುಣವಾಗಿ ನಬಾರ್ಡ್ ಮರುಪಾವತಿ ಕ್ಲೈಮ್ ಬಿಲ್ಲುಗಳನ್ನು ಒಂದು ತಿಂಗಳೊಳಗೆ ಸಲ್ಲಿಸತಕ್ಕದ್ದು.

4. ಬಳಕೆಯಾದ ಹಣ ಹಾಗೂ ಕಾಮಗಾರಿ ಪ್ರಗತಿಯನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಇವರಿಗೆ ಒದಗಿಸತಕ್ಕದ್ದು.

5. ಕಾಮಗಾರಿಗಳ ವಿವರವನ್ನು ನಬಾರ್ಡ್‌ನ ನಿಯಮಗಳಂತೆ ಗ್ರಾಮ ಪಂಚಾಯತಿಯ ಸೂಚನಾ ಫಲಕಗಳಲ್ಲಿ ಹಾಗೂ ಕಾಮಗಾರಿಗಳನ್ನು ನಡೆಸುತ್ತಿರುವ ಸ್ಥಳಗಳಲ್ಲಿ ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು, ಗ್ರಾಮ ಪಂಚಾಯತಿಯ ಸೂಚನಾ ಫಲಕಗಳಲ್ಲಿ ವಿವರಗಳನ್ನು ಬರೆಸುವ ಜವಾಬ್ದಾರಿ ಆಯಾ ಜಿಲ್ಲಾ ಪಂಚಾಯತಿಯ ಇಂಜಿನಿಯರಿಂಗ್ ವಿಭಾಗದ ಅಧಿಕಾರಿಗಳದ್ದಾಗಿರುತ್ತದೆ.

6. ಬಳಕೆಯಾದ ಹಣ ಕುರಿತಂತೆ ಈ ಯೋಜನೆಯಡಿಯ ಎಲ್ಲಾ ಕಾಮಗಾರಿಗಳ Project Completion Report ನ್ನು ಸರ್ಕಾರಕ್ಕೆ ಹಾಗೂ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಗೆ ಒದಗಿಸತಕ್ಕದ್ದು.

7. ಈ ಯೋಜನೆಯ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿದ ಬಳಿಕ ಕಾಮಗಾರಿಗಳ ಬಿಲ್ಲುಗಳನ್ನು ಪಾವತಿ ಮಾಡುವುದು ಕಡ್ಡಾಯವಾಗಿರುತ್ತದೆ.

8. ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿದ ಹಣವನ್ನು ಜಿಲ್ಲಾ ಖಜಾನೆಯು ಪ್ರಸ್ತುತ ವರ್ಷಕ್ಕೆ ನಿಗಧಿಗೊಳಿಸುವ ದಿನಾಂಕದೊಳಗೆ ಡ್ರಾ ಮಾಡಿ ವಿನಿಯೋಗಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

ಉಪ ನಿರ್ದೇಶಕರು ತಾಂ,
(ರಸ್ತೆ ಮತ್ತು ಸೇತುವೆ)
ಗ್ರಾಮೀಣ ಮೂಲಭೂತ ಸೌಲಭ್ಯಗಳು
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಇಲಾಖೆ

6/3/17

(ಡಾ. ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು
2. ಮಹಾಲೇಖಪಾಲರು (ಆಡಿಟ್-1) ಕರ್ನಾಟಕ, ಬೆಂಗಳೂರು
3. ಮಹಾಲೇಖಪಾಲರು (ಆಡಿಟ್-2) ಕರ್ನಾಟಕ, ಬೆಂಗಳೂರು
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ರವರ ಆಪ್ತ ಕಾರ್ಯದರ್ಶಿಗಳು.
6. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (ಪಿಎಂಯು) (ಐಎಫ್) 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ, ಕಟ್ಟಡ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. ಬಹುಮಹಡಿ ಕಟ್ಟಡ, ಬೆಂಗಳೂರು.
11. ವಿಶೇಷಾಧಿಕಾರಿಗಳು, (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
12. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಕರ್ನಾಟಕ ವಿಧಾನ ಸಭೆಯ ಮಾನ್ಯ ವಿರೋದ ಪಕ್ಷದ ನಾಯಕರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
14. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
15. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನಾ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
16. ಖಜಾನಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಳಗಾಂ, ಗದಗ, ಹಾವೇರಿ ಮತ್ತು ಉತ್ತರ ಕನ್ನಡ
17. ಅಧೀನ ಕಾರ್ಯದರ್ಶಿ, ವೆಚ್ಚ-6, ಜಿ.ಪಂ, ಆರ್ಥಿಕ ಇಲಾಖೆ, ಬೆಂಗಳೂರು.

18. ಮುಖ್ಯ ಇಂಜನಿಯರ್, ಪಂಚಾಯತ್‌ರಾಜ್ ಇಂಜನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು.-9.

19. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಳಗಾಂ, ಗದಗ, ಹಾವೇರಿ ಮತ್ತು ಉತ್ತರ ಕನ್ನಡ.

20. ಕಾರ್ಯಪಾಲಕ ಅಭಿಯಂತರರು.ಪಂಚಾಯತ್ ರಾಜ್ ಇಂಜನಿಯರಿಂಗ್ ವಿಭಾಗ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಳಗಾಂ, ಗದಗ, ಹಾವೇರಿ ಮತ್ತು ಕಾರವಾರ ಮತ್ತು ಶಿರಸಿ.

21. ವೈಬ್‌ಸೈಟ್/ಮಾಹಿತಿಕೇಂದ್ರ-(10 ಪ್ರತಿಗಳು), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. ಬಹುಮಹಡಿ ಕಟ್ಟಡ, ಬೆಂಗಳೂರು.

22. ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.